**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 518 (601)

ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ :09-03-2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಂಡ ಶಿಕ್ಷಕರನ್ನು ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಹೌದು |
| ಆ) | ವರ್ಗಾವಣೆಗೊಂಡರೂ ಬಿಡುಗಡೆ ಮಾಡದೇ ಇರಲು ಕಾರಣವೇನು; | ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಮತ್ತು ಪರೀಕ್ಷೆಯಲ್ಲಿ ಫಲಿತಾಂಶವನ್ನು ಉತ್ತಮಗೊಳಿಸುವಿಕೆಯ ಉದ್ದೇಶದಿಂದ 2024-25ನೇ ಸಾಲಿನ ವರ್ಗಾವಣೆಯಲ್ಲಿ ಕೌನ್ಸಿಲಿಂಗ್ ಮೂಲಕ ಕೋರಿಕೆ ವರ್ಗಾವಣೆಯಾದ ಎಲ್ಲಾ ಶಿಕ್ಷಕರನ್ನು ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅದೇ ಶಾಲೆಯ ಅದೇ ಹುದ್ದೆಯಲ್ಲಿ ಮುಂದುವರೆಸುವುದು ಎಂದು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ದಿನಾಂಕ:11-11-2025ರ ಅಧಿಕೃತ ಜ್ಞಾಪನದಲ್ಲಿ ಸೂಚಿಸಲಾಗಿರುತ್ತದೆ.<br>(ಪ್ರತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ) |
| ಇ) | ಹಾಗೂ ವರ್ಗಾವಣೆಗೊಂಡ ಶಿಕ್ಷಕರನ್ನು ಯಾವಾಗ ಬಿಡುಗಡೆ ಮಾಡಲಾಗುವುದು? | 2025-26ನೇ ಶೈಕ್ಷಣಿಕ ವರ್ಷ ಅಂತ್ಯದ ನಂತರದಲ್ಲಿ ಅಂದರೆ ದಿನಾಂಕ: 09.04.2026ರಂದು ವರ್ಗಾವಣೆಗೊಂಡ ಶಿಕ್ಷಕರನ್ನು ಬಿಡುಗಡೆ ಮಾಡಲು ಸಂಬಂಧಿಸಿದ ನಿಯಂತ್ರಣಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. |

**ಇಪಿ 21 ಪಿಎಂಎ 2026**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ

ಸಚಿವರು

ಕರ್ನಾಟಕಸರ್ಕಾರ

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ3(7) ಪ್ರಾ.ಪ್ರೌ.ಶಾಶಿ ಸಾಮಾನ್ಯ ವರ್ಗಾವಣೆ /01/2025-26 ದಿನಾಂಕ 11/11/2025

**: ಅಧಿಕೃತ ಜ್ಞಾಪನ :**

**ವಿಷಯ:** 2024-25ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕ ವೃಂದ/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರು ಮತ್ತು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದ, ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವಿಶೇಷ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಯಲ್ಲಿ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆಗೊಂಡ ಶಿಕ್ಷಕರನ್ನು ಪ್ರಸಕ್ತ 2025-26ನೇ ಸಾಲಿನ ಶೈಕ್ಷಣಿಕ ಅವಧಿ ಮುಗಿದ ನಂತರ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1. ಈ ಕಛೇರಿಯಿಂದ ಹೊರಡಿಸಲಾಗಿರುವ ವರ್ಗಾವಣಾ ಅಧಿಸೂಚನೆ ಸಂಖ್ಯೆ: ಸಿ3(7) ಪ್ರಾ.ಪ್ರೌ.ಶಾಶಿ ಸಾಮಾನ್ಯ ವರ್ಗಾವಣೆ /01/2025-26 ದಿನಾಂಕ: 29/05/2025, 21/10/2025

2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸೂಚನೆಯ ಮೇರೆಗೆ.

----- ****** -----

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ಅಧಿನಿಯಮ-2020 [2020ರ ಕರ್ನಾಟಕ ಅಧಿನಿಯಮ ಸಂಖ್ಯೆ:04] ಹಾಗೂ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ನಿಯಮಗಳು-2020ರ ಹಾಗೂ ವರ್ಗಾವಣಾ ತಿದ್ದುಪಡಿ ಕಾಯ್ದೆ ಮತ್ತು ನಿಯಮಗಳು-2022ರ ಪ್ರಕಾರ ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರನ್ನು ಒಳಗೊಂಡಂತೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕ ವೃಂದ/ತತ್ಸಮಾನ ವೃಂದದ ಶಿಕ್ಷಕರು ಮತ್ತು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದ, ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವಿಶೇಷ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳಿಗೆ ಸಾಮಾನ್ಯ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿಗೊಳಿಸಲಾಗಿದೆ.

ಪರಸ್ಪರ ವರ್ಗಾವಣೆಗೊಂಡ ಶಿಕ್ಷಕರನ್ನು ತಕ್ಷಣ ಕರ್ತವ್ಯದಿಂದ ಬಿಡುಗಡೆಗೊಳಿಸುವುದು ಮತ್ತು ವರ್ಗಾವಣೆಯಾಗಿ ಬಂದ ಶಿಕ್ಷಕರನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವುದು.

ಪರಸ್ಪರ ವರ್ಗಾವಣೆಗೊಂಡ ಶಿಕ್ಷಕರನ್ನು ಹೊರತುಪಡಿಸಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಮತ್ತು ಪರೀಕ್ಷೆಯಲ್ಲಿ ಫಲಿತಾಂಶವನ್ನು ಉತ್ತಮಗೊಳಿಸುವಿಕೆಯ ಉದ್ದೇಶದಿಂದ ಕೌನ್ಸಿಲಿಂಗ್ ಮೂಲಕ ಕೋರಿಕೆ ವರ್ಗಾವಣೆಯಾಗುವ ಎಲ್ಲಾ ಶಿಕ್ಷಕರನ್ನು ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅದೇ ಶಾಲೆಯ ಅದೇ ಹುದ್ದೆಯಲ್ಲಿ ಮುಂದುವರೆಸುವುದು ಹಾಗೂ ದಿನಾಂಕ: 09/04/2026 ರಂದು ಮೂಲ ಕರ್ತವ್ಯನಿರತ ಹುದ್ದೆ/ಶಾಲೆಯಿಂದ ಬಿಡುಗಡೆಗೊಳಿಸುವುದು ಮತ್ತು ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಂಡ ಶಿಕ್ಷಕರುಗಳು ದಿನಾಂಕ: 10/04/2026 ರಂದು ವರ್ಗಾಯಿತ ಹುದ್ದೆಯ/ಶಾಲೆಯ ಕರ್ತವ್ಯದಲ್ಲಿ ಕಡ್ಡಾಯವಾಗಿ ಹಾಜರಾಗತಕ್ಕದ್ದು. ಈ ಕುರಿತು ಎಲ್ಲಾ ಸಕ್ಷಮ ವರ್ಗಾವಣಾ ಪ್ರಾಧಿಕಾರಿಗಳು ಅಗತ್ಯ ಕ್ರಮವಹಿಸಲು ತಿಳಿಸಿದೆ.

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ, ಅಗತ್ಯ ಕ್ರಮಕ್ಕಾಗಿ

1) ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ
2) ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ
3) ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
4) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ಮೈಸೂರು /ಬೆಳಗಾವಿ/ಕಲಬುರಗಿ

5) ಶಾಲಾ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
6) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು[ಆಡಳಿತ] ರವರ ಮೂಲಕ)

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಕಛೇರಿ ಪ್ರತಿ.